I

(8)

ಕರ್ನಾಟಕ ಸರ್ಕಾರ
(ಕಂದಾಯ ಇಲಾಖೆ)
ಉಪತಹಶೀಲ್ದಾರವರ ಕಾರ್ಯಾಲಯ ನಾಡಕಛೇರಿ ಗುಡೇಕೋಟೆ

ಸಂ/ಕಂ/ಹ.ಬ./ನಾಕಗು/36/2014-15. ದಿನಾಂಕ:21-06-2016.

| ವಾದಿಗಳು | ಪ್ರತಿವಾದಿಗಳು |
|---|---|
| 1)ಎನ್.ಹಾಲಸ್ವಾಮಿ ತಂದೆ ಎನ್.ತಿಪ್ಪಣ್ಣ<br>2)ಎನ್.ಸಣ್ಣ ಹಾಲಸ್ವಾಮಿ ತಂದೆ ಎನ್.ತಿಪ್ಪಣ್ಣ<br>3)ಬಸಪ್ಪ<br>4)ಸಿದ್ದಲಿಂಗಪ್ಪ<br>5)ಕೊಟ್ರಪ್ಪ<br>6)ಸಿದ್ದಪ್ಪ<br>7)ಸಿದ್ದಬಸಪ್ಪ<br>8)ಶಿವಪ್ಪ<br>9)ಚನ್ನಬಸಪ್ಪ<br>ಗೆದ್ದಲಗಟ್ಟೆ ಗ್ರಾಮ<br>ಕೂಡ್ಲಿಗಿ ತಾಲೂಕು | ಎನ್.ಎ.ಶಿವನಾಗಪ್ಪ ತಂದೆ ಶಾಂತವೀರಪ್ಪ<br>ಗೆದ್ದಲಗಟ್ಟೆ ಗ್ರಾಮ<br>ಕೂಡ್ಲಿಗಿ ತಾಲೂಕು |
| ಕೂಡ್ಲಿಗಿ ತಾಲೂಕು ಜರ್ಮಲಿ ಗ್ರಾಮದ ಸನಂ 281/7. 363. ವಿಸ್ತೀರ್ಣ 8-20. 6-02. ಎಕ್ರೆ ಜಮೀನುಗಳನ್ನು ಪೋತಿವಾರಸು ಪ್ರಕಾರ ಹಕ್ಕು ಬದಲಾವಣೆ ಮಾಡುವ ಬಗ್ಗೆ. | |

ಪ್ರಸ್ತಾವನೆ:

ಕೂಡ್ಲಿಗಿ ತಾಲೂಕು ಜರ್ಮಲಿ ಗ್ರಾಮದ ಸನಂ 281/7. 363. ವಿಸ್ತೀರ್ಣ 8-20. 6-02. ಎಕ್ರೆ ಜಮೀನುಗಳನ್ನು ಸದರಿ ತಾಲೂಕು ಎನ್.ಹಾಲಸ್ವಾಮಿ ತಂದೆ ಎನ್.ತಿಪ್ಪಣ್ಣ ಇವರು ಪೋತಿವಾರಸು ಪ್ರಕಾರ ಹಕ್ಕು ಬದಲಾವಣೆ ಮಾಡಲು ಕೋರಿ ಅರ್ಜಿ ಸಲ್ಲಿಸಿರುತ್ತಾರೆ. ಈ ಬಗ್ಗೆ ಗ್ರಾಮಲೆಕ್ಕಿಗರು ಜರ್ಮಲಿ ಇವರು ನಮೂನೆ-21 ನೋಟಿಸನ್ನು ದಿನಾಂಕ 06-09-2014. ರಂದು ಗ್ರಾಮದಲ್ಲಿ ಪ್ರಚೂರು ಪಡಿಸಿ ಹಾಗೂ ಸಂಬಂಧಪಟ್ಟವರಿಗೆ ಜಾರಿ ಮಾಡಲಾಗಿ ಸದರಿ ತಾಲೂಕು ಗೆದ್ದಲಗಟ್ಟೆ ಗ್ರಾಮದ ಎನ್.ಶಿವನಾಗಪ್ಪ ತಂದೆ ಶಾಂತವೀರಪ್ಪ ಇವರು ತಕರಾರು ಅರ್ಜಿ ಸಲ್ಲಿಸಿರುವ ಕಾರಣ ಈ ಪ್ರಕರಣವನ್ನು ಎಂ.ಆರ್.ನಂಬರ್: 02/2014-15. ದಿನಾಂಕ 07-10-2014. ರಲ್ಲಿ ವಿವಾದಾಸ್ಪದ ಪ್ರಕರಣವೆಂದು ಪರಿಗಣಿಸಿ ಮುಂದಿನ ಕ್ರಮಕ್ಕೆ ಈ ಕಾರ್ಯಾಲಯಕ್ಕೆ ಕಳುಹಿಸಿ ಕೊಟ್ಟಿರುತ್ತಾರೆ.

ಈ ಪ್ರಕರಣವನ್ನು ಈ ಕಾರ್ಯಾಲಯದಲ್ಲಿ ವಿಚಾರಣೆ ಮಾಡುವ ದಿಸೆಯಲ್ಲಿ ಉಭಯ ಪಕ್ಷದವರಿಗೂ ನೋಟಿಸ್ಸು ನೀಡಿ ದಿನಾಂಕ 02-11-2014. ರಿಂದ 21-06-2016 ರ ವರೆಗೆ ವಿಚಾರಣೆ ಮಾಡಲಾಯಿತು.

ವಿಚಾರಣೆ ಸಮಯದಲ್ಲಿ ಅರ್ಜಿದಾರರು ಮತ್ತು ತಕರಾರುದಾರರು ಹಾಜರಾಗಿರುತ್ತಾರೆ. ಅರ್ಜಿದಾರರು ಜರ್ಮಲಿ ಗ್ರಾಮದ ಸನಂ 281/7. 363. ವಿಸ್ತೀರ್ಣ 8-20. 6-02. ಎಕ್ರೆ ಜಮೀನುಗಳು ನಮ್ಮ ತಂದೆಯವರಾದ ತಿಪ್ಪಣ್ಣ ಇವರ ಹೆಸರಲ್ಲಿ ಜಂಟಿ ಲೆಕ್ಕ ದಾಖಲೆ ಇರುತ್ತದೆ. ಇವರು ದಿನಾಂಕ 08-09-1997 ರಂದು ಹಾಗೂ ನಮ್ಮ ತಾಯಿ ಎನ್.ವೀರಮ್ಮ ಗಂಡ ತಿಪ್ಪಣ್ಣ ಇವರು ದಿನಾಂಕ 08-08-2003 ರಂದು ನಿಧನ ಹೊಂದಿರುತ್ತಾರೆ. ಕಾರಣ ಸದರಿ ತಿಪ್ಪಣ್ಣ ಇವರ ಹೆಸರನ್ನು ಕಡಿಮೆ ಮಾಡಿ ಪೋತಿವಾರಸು ಹಕ್ಕಿನ

ಪ್ರಕಾರ ನಮ್ಮಗಳ ಹೆಸರುಗಳನ್ನು ಪೂರ್ವ ಪಟ್ಟದಾರರ ಜೊತೆ ಜಂಟಿಯಾಗಿ ಹಕ್ಕು ಬದಲಾವಣೆ ಮಾಡಲು ಕೋರಿರುತ್ತಾರೆ.

ವಿಚಾರಣೆಯಲ್ಲಿ ತಕರಾರುದಾರರು ಹಾಜರಾಗಿದ್ದು ಸದರಿ ವಿವಾದಿತ ಜಮೀನುಗಳು ನಮಗೆ ತಿಳಿಸದೇ ಹಾಗೂ ನಮ್ಮ ಅನುಮತಿ ಪಡೆಯದೇ ಪೋತಿವಾರಸು ಪ್ರಕಾರ ಹಕ್ಕು ಬದಲಾವಣೆ ಮಾಡಲು ಕೋರಿ ಅರ್ಜಿ ಸಲ್ಲಿಸಿರುತ್ತಾರೆ. ಕಾರಣ ಪೋತಿವಾರಸು ಪ್ರಕಾರ ಅರ್ಜಿದಾರರ ಹೆಸರಲ್ಲಿ ಹಕ್ಕು ಬದಲಾವಣೆ ಮಾಡಲು ನಮ್ಮ ತಕರಾರು ಇರುವುದಾಗಿ ಕೋರಿರುತ್ತಾರೆ.

ಮೇಲಿನ ಎಲ್ಲಾ ಅಂಶಗಳನ್ನು ಗಣನೆಗೆ ತೆಗೆದು ಕೊಂಡು ಸದರಿ ವಿವಾದಿತ ಜಮೀನಿನುಗಳ ಕಂದಾಯ ಲೆಕ್ಕಗಳನ್ನು ಪರಿಶೀಲಿಸಿ ಅರ್ಜಿದಾರರ ಹೇಳಿಕೆ ಮತ್ತು ತಕರಾರುದಾರರ ಹೇಳಿಕೆಗಳನ್ನು ಕೇಳಿ ಸದರಿ ಜಮೀನುಗಳ ಬಗ್ಗೆ ಕಂದಾಯ ಪರಿವೀಕ್ಷಕರು ಮತ್ತು ಗ್ರಾಮಲೆಕಿಗರು ಗ್ರಾಮದಲ್ಲಿ ಮರು ವಿಚಾರಣೆ ಮಾಡಲಾಗಿ ಪೋತಿವಾರಸು ಹಾಗೂ ಪಾಲು ವಿಭಾಗದ ಪ್ರಕಾರ ಹಕ್ಕು ಬದಲಾವಣೆ ಮಾಡಿ ಕೊಂಡಿರುವುದಿಲ್ಲ ಕಾರಣ ಯಥಾಸ್ಥಿತಿಯಂತೆ ಮುಂದುವರೆಸಲು ಮಹಜರುಗಳೊಂದಿಗೆ ವರದಿ ಸಲ್ಲಿಸಿರುತ್ತಾರೆ. ಕಾರಣ ಈ ಕೆಳಗಿನಂತೆ ಆದೇಶ ಮಾಡಲಾಗಿದೆ.

## -:ಆದೇಶ:-

ಮೇಲೆ ವಿವರಿಸಿದ ಸಂದರ್ಭ ವಾಸ್ತುವಾಂಶ ಮತ್ತು ಕಾರಣಗಳಿಂದ ಕೂಡ್ಲಿಗಿ ತಾಲೂಕು ಜರ್ಮಲಿ ಗ್ರಾಮದ ಸನಂ 281/7. 363. ವಿಸ್ತೀರ್ಣ 8-20. 6-02. ಎಕ್ರೆ ಜಮೀನುಗಳು ಈ ಹಿಂದೆ ಪಾಲು ವಿಭಾಗ ಪತ್ರ ಹಾಗೂ ಪೋತಿವಾರಸು ಪ್ರಕಾರ ಹಕ್ಕು ಬದಲಾವಣೆಯಾಗಿಲ್ಲದ ಕಾರಣ ಅರ್ಜಿದಾರರ ಕೋರಿಕೆಯನ್ನು ತಳ್ಳಿಹಾಕುತ್ತಾ ಯಥಾಸ್ಥಿತಿಯಂತೆ ಮುಂದುವರೆಸಲು ಆದೇಶಿಸಿ ಈ ಪ್ರಕರಣವನ್ನು ಈ ಕಾರ್ಯಾಲಯದಲ್ಲಿ ಈ ಹಂತದಲ್ಲಿ ಮುಕ್ತಾಯಗೊಳಿಸಲು ಆದೇಶಿಸಲಾಗಿದೆ.

ಈ ಆದೇಶವನ್ನು ಹೇಳಿ ಬರೆಯಿಸಿ ಬೆರಳಚ್ಚು ಮಾಡಿಸಿ ತಪ್ಪುಗಳನ್ನು ತಿದ್ದಿ ದಿನಾಂಕ 21-06-2016 ರಂದು ತೆರೆದ ನ್ಯಾಯಾಲಯದಲ್ಲಿ ಘೋಷಿಸಲಾಯಿತು.

ಉಪತಹಶೀಲ್ದಾರರು
ನಾಡಕಛೇರಿ ಗುಡೇಕೋಟೆ

ಇದರ ಪ್ರತಿಯನ್ನು:

1) ಅರ್ಜಿದಾರರಾದ ಎನ್.ಹಾಲಸ್ವಾಮಿ ತಂದೆ ಎನ್.ತಿಪ್ಪಣ್ಣ ಎನ್.ಹಾಲಸ್ವಾಮಿ ತಂದೆ ಎನ್.ತಿಪ್ಪಣ್ಣ ಹಾಗೂ ಇತರರು ಗೆದ್ದಲಗಟ್ಟೆ ಗ್ರಾಮ ಕೂಡ್ಲಿಗಿ ತಾಲೂಕು ಇವರಿಗೆ ಕಳುಹಿಸಿ ಕೊಡಲಾಗಿದೆ.
2) ತಕರಾರುದಾರರಾದ ಎನ್.ಶಿವನಾಗಪ್ಪ ತಂದೆ ಶಾಂತವೀರಪ್ಪ ಗೆದ್ದಲಗಟ್ಟೆ ಗ್ರಾಮ ಕೂಡ್ಲಿಗಿ ತಾಲೂಕು ಇವರಿಗೆ ಕಳುಹಿಸಿ ಕೊಡಲಾಗಿದೆ.
3) ಗಣಕೀಕರಣ ವಿಭಾಗ ತಾಲೂಕು ಕಛೇರಿ ಕೂಡ್ಲಿಗಿ ಇವರ ಮುಂದಿನ ಕ್ರಮಕ್ಕಾಗಿ ಕಳುಹಿಸಿ ಕೊಡಲಾಗಿದೆ.
4) ಅಪೀಲು ಅವಧಿ 60 ದಿವಸ ಇರುತ್ತದೆ.

[redacted]
ಕ್ರ.ಸಂ. 13 [redacted]
[redacted]ರ